ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಧಾರವಾಡ,

**ಅಧಿಸೂಚನೆ ನಂ. 01/2019**

ದಿನಾಂಕಃ 8ನೇ ಜನೇವರಿ- 2019

**ವಿಷಯ** ಃ ಶೀಘ್ರಲಿಪಿಗಾರ, ಬೆರಳಚ್ಚುಗಾರ, ಬೆರಳಚ್ಚು-ನಕಲುಗಾರ, ಆದೇಶಿಕ ಜಾರಿಕಾರ ಮತ್ತು ಜವಾನರ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಕುರಿತು.

**ಉಲ್ಲೇಖ** ಃ
1. ಉಚ್ಚ ನ್ಯಾಯಾಲಯ, ಬೆಂಗಳೂರು ಪತ್ರ ಸಂಖ್ಯೆಃ ಎಲ್‌ಸಿಎ II/128/2012, ದಿನಾಂಕಃ 13-02-2017
2. ಉಚ್ಚ ನ್ಯಾಯಾಲಯ, ಬೆಂಗಳೂರು ಪತ್ರ ಸಂಖ್ಯೆಃ ಎಲ್‌ಸಿಎ II/128/2012, ದಿನಾಂಕಃ 02-08-2017
3. ಉಚ್ಚ ನ್ಯಾಯಾಲಯ, ಬೆಂಗಳೂರು ಪತ್ರ ಸಂಖ್ಯೆಃ ಎಲ್‌ಸಿಎ II/128/2012, ದಿನಾಂಕಃ 19.09.2018
4. ಸರ್ಕಾರಿ ಆದೇಶ ಸಂಖ್ಯೆ ಎಲ್‌ಎಡಬ್ಲ್ಯೂ 156 ಎಲ್‌ಎಸಿ 2018, ದಿನಾಂಕ 07.08.2018.
5. ಈ ಕಚೇರಿಯ ಅಧಿಸೂಚನೆ ಸಂಖ್ಯೆಃ 02/2013, ದಿನಾಂಕಃ 13ನೇ ಆಗಸ್ಟ್ 2013.
6. ಈ ಕಚೇರಿಯ ಟಿಪ್ಪಣಿ ದಿನಾಂಕ 27.12.2018.

------

ಮೇಲ್ಕಂಡ ಅಧಿಸೂಚನೆಯನ್ವಯ ಧಾರವಾಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಒಟ್ಟು 01-ಶೀಘ್ರಲಿಪಿಗಾರ, 11-ಬೆರಳಚ್ಚುಗಾರ, 01-ಬೆರಳಚ್ಚು-ನಕಲುಗಾರ, 13- ಆದೇಶ-ಜಾರಿಕಾರ ಹಾಗೂ 05-ಜವಾನರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಧಾರವಾಡ ಜಿಲ್ಲಾ ನ್ಯಾಯಾಲಯ ವೆಬ್‌ಸೈಟ್

https://districts.ecourts.gov.in/dharwad-onlinerecruitment

ಅಥವಾ

https://karnatakajudiciary.kar.nic.in/districtrecruitment.asp

ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ **16.01.2019 ರಿಂದ ದಿನಾಂಕ 14.02.2019ರ ರಾತ್ರಿ 11.59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

1. **ಶೀಘ್ರಲಿಪಿಗಾರರು (Stenographers)ಃ ಹುದ್ದೆಗಳ ಸಂಖ್ಯೆಃ 01**

**ವೇತನ ಶ್ರೇಣಿಃ** **27650**-650-29600-750-32600-850-36000-950- 39800-1100-46400-1250-52650

ಹುದ್ದೆಗಳ ವರ್ಗೀಕರಣಃ

| ಮೀಸಲಾತಿ | | ಒಟ್ಟು |
|---|---|---|
| ಸಾ.ಅ | 1 | 1 |
| ಒಟ್ಟು | 1 | 1 |

**ವಿದ್ಯಾರ್ಹತೆಃ**

ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು

(ಎ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

(ಬಿ) ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ (Senior Grade) ಹಾಗೂ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ (Senior Grade) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಉತ್ತೀರ್ಣರಾಗಿರಬೇಕು.

2. **ಬೆರಳಚ್ಚುಗಾರ (Typist)ಃ ಹುದ್ದೆಗಳ ಸಂಖ್ಯೆಃ 11**

**ವೇತನ ಶ್ರೇಣಿಃ** 21400-500-22400-550-24600-600-27000-650- 29600-750-32600-850-36000-950-39800-1100- 42000

ಹುದ್ದೆಗಳ ವರ್ಗೀಕರಣಃ

| ಮೀಸಲಾತಿ | ಇತರೆ | ಗ್ರಾಮೀಣ | ಮಾ.ಸೈ | ಅಂ ವಿ | ಒಟ್ಟು |
|---|---|---|---|---|---|
| ಪ.ಜಾ. | -- | 01* | 01* | -- | 02 |
| ಪ.ಜಾ. | -- | 01 | -- | -- | 01 |
| ಪ್ರವರ್ಗ-1 | 01 | -- | -- | -- | 01 |
| ಸಾ.ಅ | 02 | 01 | -- | 01** | 04 |
| ಪ್ರವರ್ಗ-3(ಬಿ) | 01 | -- | -- | -- | 01 |
| ಪ್ರವರ್ಗ-2(ಎ) | -- | 01 | -- | -- | 01 |
| ಪ್ರವರ್ಗ-2(ಬಿ) | 01 | -- | -- | -- | 01 |
| ಒಟ್ಟು | 05 | 04 | 01 | 01 | 11 |

* ಬ್ಯಾಕ್‌ಲಾಗ್ ಹುದ್ದೆ

** ಕುಷ್ಟರೋಗದಿಂದ ಗುಣಮುಖರಾದ ಅಂಗವಿಕಲರಿಗೆ/ಬುದ್ಧಿಮಾಂದ್ಯತೆ/ ಮಾನಸಿಕ ಅಸ್ವಸ್ಥತೆ

_.3.

**ವಿದ್ಯಾರ್ಹತೆಃ**

ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು

(ಎ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

(ಬಿ) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಎರಡೂ ಭಾಷೆಯಲ್ಲಿ ಹಿರಿಯ ಶ್ರೇಣಿ ಬೆರಳಚ್ಚು (Senior Grade) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರ್ಯಾಕ್ಟಿಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರತಕ್ಕದ್ದು.

**3. ಬೆರಳಚ್ಚು ನಕಲುಗಾರ (Typist-Copyist)ಃ ಹುದ್ದೆಗಳ ಸಂಖ್ಯೆಃ 01**

**ವೇತನ ಶ್ರೇಣಿಃ** 21400-500-22400-550-24600-600-27000-650- 29600-750-32600-850-36000-950-39800-1100-42000

ಹುದ್ದೆಗಳ ವರ್ಗೀಕರಣಃ

| **ಮೀಸಲಾತಿ** | **ಮಹಿಳೆ** | **ಒಟ್ಟು** |
|---|---|---|
| ಪ.ಜಾ. | 01 | 01 |
| **ಒಟ್ಟು** | **01** | **01** |

**ವಿದ್ಯಾರ್ಹತೆಃ**

ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು

(ಎ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

(ಬಿ) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಎರಡೂ ಭಾಷೆಯಲ್ಲಿ ಕಿರಿಯ ಶ್ರೇಣಿ ಬೆರಳಚ್ಚು (Junior Grade) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರ್ಯಾಕ್ಟಿಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರತಕ್ಕದ್ದು.

-4.

**4. ಆದೇಶ ಜಾರಿಕಾರರು (Process-Server)ಃ ಹುದ್ದೆಗಳ ಸಂಖ್ಯೆಃ 13**

**ವೇತನ ಶ್ರೇಣಿಃ** 19950-450-20400-500-22400-550-24600-600- 27000-650-29600-750-32600-850-36000-950-37900

ಹುದ್ದೆಗಳ ವರ್ಗೀಕರಣಃ

| ಮೀಸಲಾತಿ | ಇತರೆ | ಗ್ರಾಮೀಣ | ಮಹಿಳೆ | ಮಾ.ಸೈ | ಅಂ.ವಿ | ಒಟ್ಟು |
|---|---|---|---|---|---|---|
| ಸಾ.ಅ | 02 | 02 | 01 | 01 | 01* | 07 |
| ಪ.ಜಾ. | 01 | 01 | -- | -- | -- | 02 |
| ಪ್ರವರ್ಗ-1 | -- | 01 | -- | -- | -- | 01 |
| ಪ್ರವರ್ಗ-2(ಎ) | 01 | 01 | -- | -- | -- | 02 |
| ಪ್ರವರ್ಗ-2(ಬಿ) | -- | 01 | -- | -- | -- | 01 |
| ಒಟ್ಟು | 04 | 06 | 01 | 01 | 01 | 13 |

*** ಚಲನ-ವಲನ ವೈಕಲ್ಯವುಳ್ಳವರಿಗೆ**

**ವಿದ್ಯಾರ್ಹತೆಃ**

ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು

(ಎ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

(ಬಿ) ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರಬೇಕು.
(ಭಾರಿ ವಾಹನ ಚಾಲನೆ ಲೈಸನ್ಸ್ ಉಳ್ಳವರಿಗೆ ಆದ್ಯತೆ ನೀಡಲಾಗುವುದು)

**5. ಜವಾನ (Peons)ಃ ಹುದ್ದೆಗಳ ಸಂಖ್ಯೆಃ 05**

**ವೇತನ ಶ್ರೇಣಿಃ** 17000-400-18600-450-20400-500-22400-550-
24600-600-2700-650-28950

ಹುದ್ದೆಗಳ ವರ್ಗೀಕರಣಃ

| ಮೀಸಲಾತಿ | ಇತರೆ | ಮಹಿಳೆ | ಅಂ.ವಿ. | ಒಟ್ಟು |
|---|---|---|---|---|
| ಪ.ಜಾತಿ | **01** | **--** | **--** | **01** |
| ಸಾ.ಅ. | 01 | -- | 01* | 02 |
| ಪ್ರವರ್ಗ-3(ಬಿ) | -- | 01 | -- | 01 |
| **ಪ್ರವರ್ಗ-2(ಎ)** | **01** | **--** | **--** | **01** |
| **ಒಟ್ಟು** | **03** | **01** | **01** | **05** |

* ಶ್ರವಣದೋಷವುಳ್ಳವರಿಗೆ

..5.

**ವಿದ್ಯಾರ್ಹತೆಃ**

ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದಂದು 7ನೇ ತರಗತಿಯ ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. (7ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ (Grade) ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರು ನಮೂದು ಇರುವ ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಅಂಕಪಟ್ಟಿಯಲ್ಲಿ ತ್ರೈಮಾಸಿಕ ಅಂಕಗಳಿದ್ದರೆ ಎಲ್ಲಾ ತ್ರೈಮಾಸಿಕ ಅಂಕಗಳನ್ನು ಕ್ರೃಡೀಕರಿಸಿದ ಅಂಕಪಟ್ಟಿಯ ಅಂಕಗಳನ್ನು ಆನ್‌ಲೈನ್ ಅರ್ಜಿ ನಮೂನೆಯಲ್ಲಿ ನಮೂದಿಸತಕ್ಕದ್ದು ಹಾಗೂ ಅಂಕಪಟ್ಟಿಯು ಕಡ್ಡಾಯವಾಗಿ ಸಂಬಂದಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ದೃಢೀಕರಿಸಲ್ಪಟ್ಟಿರತಕ್ಕದ್ದು ಮತ್ತು ಸದರಿ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ದೃಢಿಕರಿಸಲ್ಪಟ್ಟ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು)

**ಆಯ್ಕೆ ವಿಧಾನ ಃ**

ಮೇಲ್ಕಾಣಿಸಿದ ಎಲ್ಲ ಹುದ್ದೆಗಳನ್ನು ಕರ್ನಾಟಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ ನೇಮಕಾತಿ) ನಿಯಮ 1982 ಮತ್ತು ಕರ್ನಾಟಕ ಆಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೇ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಪ್ರಕಾರ ನೇಮಕಾತಿಯನ್ನು ಏರ್ಪಡಿಸಲಾಗುವುದು.

<u>ಶೀಘ್ರಲಿಪಿಗಾರರ ಹುದ್ದೆಗೆ ಅರ್ಹತಾ ಪರೀಕ್ಷೆ</u>

ಅಭ್ಯರ್ಥಿಗಳಿಗೆ ಕನ್ನಡ ಭಾಷೆಯಲ್ಲಿ ಒಂದು ನಿಮಿಷಕ್ಕೆ 260 ಅಕ್ಷರಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಿ ಅದನ್ನು ಬೆರಳಚ್ಚು ಯಂತ್ರದ/ಕಂಪ್ಯೂಟರ್ ಮೂಲಕ 45 ನಿಮಿಷಗಳಲ್ಲಿ ಲಿಪ್ಯಂತರ ಮಾಡಬೇಕು.

ಅಭ್ಯರ್ಥಿಗಳಿಗೆ ಆಂಗ್ಲ ಭಾಷೆಯಲ್ಲಿ ಒಂದು ನಿಮಿಷಕ್ಕೆ 120 ಪದಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಿ ಅದನ್ನು ಬೆರಳಚ್ಚು ಯಂತ್ರದ/ಕಂಪ್ಯೂಟರ್ ಮೂಲಕ 45 ನಿಮಿಷಗಳ ಲಿಪ್ಯಂತರ ಮಾಡಬೇಕು.

ಈ ಪರೀಕ್ಷೆಯು 100 ಅಂಕಗಳಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು ಮತ್ತು ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯೂದ ಅಭ್ಯರ್ಥಿಗಳನ್ನು 1ಃ5 ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

<u>ಬೆರಳಚ್ಚುಗಾರ ಹುದ್ದೆಗೆ ಅರ್ಹತಾ ಪರೀಕ್ಷೆ</u>

ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಿರ್ದೇಶಿಸಲ್ಪಟ್ಟ ಅಧಿಕಾರಿಯವರಿಂದ 15 ನಿಮಿಷಗಳ ಕಾಲ ಉಕ್ತಲೇಖನಕ್ಕೆ ಬೆರಳಚ್ಚು ಯಂತ್ರದಲ್ಲಿ ಬೆರಳಚ್ಚುಪಡಿಸತಕ್ಕದ್ದು.

ಈ ಪರೀಕ್ಷೆಯು ಗರಿಷ್ಠ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು.

<u>ಬೆರಳಚ್ಚು-ನಕಲುಗಾರ ಹುದ್ದೆಗೆ ಅರ್ಹತಾ ಪರೀಕ್ಷೆ</u>

ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಿರ್ದೇಶಿಸಲ್ಪಟ್ಟ ಅಧಿಕಾರಿಯವರಿಂದ 15 ನಿಮಿಷಗಳ ಕಾಲ ಉಕ್ತಲೇಖನಕ್ಕೆ ಬೆರಳಚ್ಚು ಯಂತ್ರದಲ್ಲಿ ಬೆರಳಚ್ಚುಪಡಿಸತಕ್ಕದ್ದು.

_6.

ಈ ಪರೀಕ್ಷೆಯು ಗರಿಷ್ಠ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು.

ಮೇಲೆ ಹೇಳಿದ ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಅಯ್ಕೆ ಮಾಡಲಾಗುವುದು.

ಆದೇಶ-ಜಾರಿಕಾರರ ಹುದ್ದೆಗಳಿಗೆ

ಈ ಹುದ್ದೆಗೆ 10ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಟ ಅಂಕಗಳ ಅರ್ಹತೆಯ ಅಧಾರದ ಅನ್ವಯ 01 ಹುದ್ದೆಗೆ 25ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನದ ಪ್ರಕ್ರಿಯೆಗೆ ತೊಡಗಿಸಲಾಗುವುದು ಹಾಗೂ ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. (ಸಂದರ್ಶನಕ್ಕೆ ಗರಿಷ್ಠ 10 ಅಂಕಗಳನ್ನು ನಿಗದಿಪಡಿಸಲಾಗಿದೆ).

ಜವಾನರ ಹುದ್ದೆಗಳಿಗೆಃ-

ಜವಾನರ ಹುದ್ದೆಗೆ 7ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಟ ಅಂಕಗಳ ಅರ್ಹತೆಯ ಅಧಾರದ ಅನ್ವಯ 01 ಹುದ್ದೆಗೆ 10ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನ ಪ್ರಕ್ರಿಯೆಗೆ ತೊಡಗಿಸಲಾಗುವುದು ಹಾಗೂ ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಅಯ್ಕೆ ಮಾಡಲಾಗುವುದು. (ಸಂದರ್ಶನಕ್ಕೆ ಗರಿಷ್ಠ 10 ಅಂಕಗಳನ್ನು ನಿಗದಿಪಡಿಸಲಾಗಿದೆ).

**ಪರಿವೀಕ್ಷಣಾ ಅವಧಿಃ-**

ನೇಮಕ ಹೊಂದಿದ ಅಭ್ಯರ್ಥಿಗಳನ್ನು ಕರ್ನಾಟಕ ಸೇವಾ ನಿಯಮ ಪರಿವೀಕ್ಷಣಾ ನಿಯಮ 1977ರ ಪ್ರಕಾರ 02 ವರ್ಷಗಳ ಅವಧಿಯಲ್ಲಿರತಕ್ಕದ್ದು ಹಾಗೂ ಸದರಿ ಅವ ಧಿಯಲ್ಲಿ ತಮ್ಮ ಹುದ್ದೆಗಳಿಗೆ ಯಾವುದಾದರೂ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ಕನ್ನಡ ಭಾಷಾ ಪರೀಕ್ಷೆಯ ನಿಯಮದಡಿ ಗೊತ್ತುಪಡಿಸಿದರೆ ಅವುಗಳಲ್ಲಿ ಉತ್ತೀರ್ಣರಾಗತಕ್ಕದ್ದು.

**ಪಿಂಚಣಿ ಸೌಲಭ್ಯಃ**

ಸರ್ಕಾರದ ಅದೇಶ ಸಂಖ್ಯೆಃ ಎಫ್‌ಡಿ (ಎಸ್‌ಪಿಎಲ್)/04/ಪಿ.ಇ.ಟಿ/2005, ದಿನಾಂಕ 31.03.2006 ರಂತೆ ಅನ್ವಯಿಸುವುದು.

**ವಯೋಮಿತಿಃ**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ 18 ವರ್ಷ ವಯೋಮಿತಿ ಹೊಂದಿರಬೇಕು ಹಾಗೂ ಈ ಕಳಗೆ ತಿಳಿಸಿರುವಂತೆ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

1. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1 ರ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹಾಜರುಪಡಿಸಿದಲ್ಲಿ ಗರಿಷ್ಠ 40 ವರ್ಷ.
2. ಪ್ರವರ್ಗ 2-ಎ, 2-ಬಿ, 3-ಎ, 3-ಬಿ ವರ್ಗ ಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹಾಜರುಪಡಿಸಿದಲ್ಲಿ ಗರಿಷ್ಠ 38 ವರ್ಷ.
3. ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 35 ವರ್ಷ.

## ವಯೋಮಿತಿ ಸಡಿಲಿಕೆ:

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯವರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು. (ಈ ಬಗ್ಗೆ ಪ್ರಮಾಣಪತ್ರ ಸಲ್ಲಿಸುವುದು)

## ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ43, ಸೇವನೆ 2008, ದಿನಾಂಕ 07.03.2012 ಮತ್ತು ಸಿಆಸುಡಿ 15, ಸೇವನೆ.17 ದಿ. 05.07.2017 ರನ್ವಯ ಆಯ್ಕೆಯಾದ ಶೀಘ್ರಲಿಪಿಕಾರರು, ಬೆರಳಚ್ಚುಗಾರರು, ಬೆರಳಚ್ಚು_ನಕಲುಗಾರರು ಕರ್ನಾಟಕ ಸರ್ಕಾರ ನಿಗದಿ ಪಡಿಸುವ ಕಂಪ್ಯೂಟರ ಸಾಕ್ಷರತಾ ಪರೀಕ್ಷೆಯನ್ನು ಶೇಕಡಾ 50 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ನಿಗದಿತ ಅವಧಿಯಲ್ಲಿ ಉತ್ತೀರ್ಣರಾಗತಕ್ಕದ್ದು.

## ಅರ್ಜಿ ಸಲ್ಲಿಸುವ ವಿಧಾನ:

ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಬೇಕು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸಬೇಕು. SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

ಅಭ್ಯರ್ಥಿಯು ಭಾವಚಿತ್ರ ಹಾಗೂ ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

_.8.

ಅ. 5 cm ಉದ್ದ x 3.6 cm ಅಗಲವುಳ್ಳ ಇತ್ತೀಚಿನ ಬಣ್ಣದ ಭಾವಚಿತ್ರ ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ. ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ. ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26 kb ಅಳತೆಯದ್ದಾಗಿರಬೇಕು ಹಾಗೂ jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

ತದನಂತರ ಅಭ್ಯರ್ಥಿಯು ಆನ್ ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಂತರ ತುಂಬಿದ ಅರ್ಜಿಯ ಪ್ರತಿಯನ್ನು down load ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು. ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿಯೇ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಿ ಸಲ್ಲಿಸಲು **ದಿನಾಂಕ 14.02.2019ರ ರಾತ್ರಿ 11.59** ರವರೆಗೆ ಅವಕಾಶವಿರುತ್ತದೆ.

ಅರ್ಹ ಅಭ್ಯರ್ಥಿಗಳಿಗೆ SMS & E-mail ಮುಖಾಂತರ ಮಾಹಿತಿ ನೀಡಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆ/ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು.

ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿಯನ್ನು ಸಲ್ಲಿಸಲು ಯಾವುದೇ ರೀತಿಯ ಶುಲ್ಕವನ್ನು ನಿಗದಿಪಡಿಸಿರುವುದಿಲ್ಲ.

## ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನಃ

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣೆ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

## ಪ್ರಮುಖವಾದ ಸೂಚನೆಗಳುಃ

ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳು.

_.9.

1. ಜನ್ಮ ದಿನಾಂಕವನ್ನು ನಮೂ ದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/7ನೇ ತರಗತಿಯ ವಿದ್ಯಾರ್ಹತೆ ಹೊಂದಿರುವವರಿಗೆ ಜನನ ದಿನಾಂಕವನ್ನು ನಮೂದಿಸಿರುವ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ ಹೊಂದಿರತಕ್ಕದ್ದು.
2. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ, ಪ್ರವರ್ಗ-1ರ ನಮೂನೆ 'ಇ'ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್'ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಹೊಂದಿರತಕ್ಕದ್ದು.
3. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/96/ಸೇನನಿ/2005, ದಿನಾಂಕಃ 10-08-2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ್ದಿರಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
4. ಗ್ರಾಮೀಣ ಮಿಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2ರ ಜೊತೆ ನಮೂನೆ-1 ರಲ್ಲೂ ದೃಢೀಕರಣ ಪತ್ರವನ್ನು ಹೊಂದಿರಬೇಕು.
5. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕಃ 19-11-2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಹೊಂದಿರಬೇಕು.
6. ಮಾಜಿ ಸೈನಿಕ ಮಿಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆ-ಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರವನ್ನು ಹೊಂದಿರಬೇಕು..
7. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರರಿಂದ ಪಡೆದ ಪ್ರಮಾಣಪತ್ರವನ್ನು ಹೊಂದಿರಬೇಕು.

_.10.

8. ಅಭ್ಯರ್ಥಿಯು ಕೊನೆಯಲ್ಲಿ ವಿದ್ಯಾಭ್ಯಾಸ ಮಾಡಿದ ಶಾಲಾ/ಕಾಲೇಜಿನ ಮುಖ್ಯೋಪಾಧ್ಯಾಯರು/ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರ ಹೊಂದಿರಬೇಕು.
9. ಸ್ಥಳೀಯ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದ 6 ತಿಂಗಳ ಇತ್ತೀಚಿನ ಎರಡು ನಡತೆ ಪ್ರಮಾಣ ಪತ್ರಗಳನ್ನು ಹೊಂದಿರಬೇಕು.
10. ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕದೊಳಗೆ ಎಲ್ಲಾ ಪ್ರಮಾಣಪತ್ರಗಳನ್ನು ಹೊಂದಿರಬೇಕು.

**ಇತರೆ ಸೂಚನೆಗಳುಃ**

1. ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಬೆರಳಚ್ಚು-ನಕಲುಗಾರರ ಹುದ್ದೆಗಳಿಗೆ ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ-ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು.
2. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು
3. ಅರ್ಹ ಅಭ್ಯರ್ಥಿಗಳು https://districts.ecourts.gov.in/dharwad/online-recruitment ಅಥವಾ https://karnatakajudiciary.kar.nic.in/districtrecruitment.asp ವೆಬ್‌ಸೈಟಿನಿಂದ ಅರ್ಹತಾ ಪರೀಕ್ಷಯ ಪ್ರವೇಶ ಪತ್ರವನ್ನು ಮತ್ತು ಸಂದರ್ಶನದ ಪ್ರವೇಶ ಪತ್ರವನ್ನು ಡೌನ್‌ಲೋಡ ಮಾಡಿಕೊಳ್ಳುವುದು. ಈ ಕಚೇರಿಯು ಯಾವುದೇ ಕಾರಣಕ್ಕೂ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸುವುದಿಲ್ಲ. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರವನ್ನು ಡೌನ್‌ಲೋಡ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ ಅರ್ಹತಾ ಪರೀಕ್ಷೆ ಮತ್ತು ಸಂದರ್ಶನಕ್ಕೆ ಹಾಜರಾಗತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸುವುದಿಲ್ಲ.
   ಅರ್ಹತಾ ಪರೀಕ್ಷೆಯ ವೇಳಾಪಟ್ಟಿ, ಸಂದರ್ಶನದ ವೇಳಾಪಟ್ಟಿ ಹಾಗೂ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಈ ಕಚೇರಿಯ ವೆಬ್‌ಸೈಟ್ https://districts.ecourts.gov.in/dharwad-onlinerecruitment ಅಥವಾ https://karnatakajudiciary.kar.nic.in/districtrecruitment.asp ರಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ ಸಂದರ್ಶನಕ್ಕೆ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಪ್ರತಿಯೊಂದಿಗೆ ಬೇಕಾಗುವ ಇತರೇ ಮೂಲ ಪ್ರಮಾಣ ಪತ್ರಗಳನ್ನು ಹಾಜರಪಡಿಸುವುದು.
4. ಸಂದರ್ಶನದ SMS ಅಥವಾ ಇ-ಮೇಲ್ ಬಾರದೇ ಇರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.

_.11.

5. ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಅಸ್ಪದವಿರುವುದಿಲ್ಲ.
6. *ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸ ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.*

**(ಈಶಪ್ಪಾ ಕೆ ಭೂತೆ)**
**ಪ್ರಧಾನ ಜಿಲ್ಲಾ ಮತ್ತು ಸತ್ರ**
**ನ್ಯಾಯಾಧೀಶರು,**
**ಧಾರವಾಡ.**